# ಮಂಗಳೂರು ವಿಶ್ವವಿದ್ಯಾನಿಲಯ

ಸಂಖ್ಯೆ: ಮಂವಿ/ಕುಸ/ಸಿಂಡಿ/12/2026/ಎಸ್2/135083

ಕುಲಸಚಿವರ ಕಛೇರಿ
ಮಂಗಳಗಂಗೋತ್ರಿ-574199

ದಿನಾಂಕ: 11.02.2026

ರಿಗೆ:

**ಸಿಂಡಿಕೇಟಿನ ಎಲ್ಲಾ ಮಾನ್ಯ ಸದಸ್ಯರುಗಳಿಗೆ.**

ಮಾನ್ಯರೇ,

ವಿಷಯ: ದಿನಾಂಕ 10.02.2026ರಂದು ನಡೆದ ಸಿಂಡಿಕೇಟಿನ 2026ನೇ ಸಾಲಿನ ಪ್ರಥಮ ವಿಶೇಷ ಸಭೆಯ ನಡವಳಿಯ ಬಗ್ಗೆ.

------

ದಿನಾಂಕ 10.02.2026 ರಂದು ನಡೆದ ಸಿಂಡಿಕೇಟಿನ 2026ನೇ ಸಾಲಿನ ಪ್ರಥಮ ವಿಶೇಷ ಸಭೆಯ ನಡವಳಿಯನ್ನು ಈ ಮೂಲಕ ಕಳುಹಿಸಿಕೊಡಲು ನಿರ್ದೇಶಿತನಾಗಿದ್ದೇನೆ.

ತಮ್ಮ ವಿಶ್ವಾಸಿ,

ಕುಲಸಚಿವರು

**ಪ್ರತಿಗಳು:**

1. ಘನತೆವೆತ್ತ ರಾಜ್ಯಪಾಲರ ವಿಶೇಷ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಲೋಕ ಭವನ, ಬೆಂಗಳೂರು-560001 – ಇವರ ಗಮನಕ್ಕೆ
2. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ, 6ನೇ ಮಹಡಿ, ಬಹುಮಹಡಿಗಳ ಕಟ್ಟಡ, ಡಾ. ಅಂಬೇಡ್ಕರ್ ವೀಧಿ, ಬೆಂಗಳೂರು-560001.

# ಮಂಗಳೂರು ವಿಶ್ವವಿದ್ಯಾನಿಲಯ

**ದಿನಾಂಕ 10.02.2026ರಂದು ಅಪರಾಹ್ನ ಗಂಟೆ 3.00ಕ್ಕೆ ಮಂಗಳೂರು ವಿಶ್ವವಿದ್ಯಾನಿಲಯದ ಆಡಳಿತ ಸೌಧದ ಸಿಂಡಿಕೇಟು ಸಭಾಂಗಣದಲ್ಲಿ ನಡೆದ ಸಿಂಡಿಕೇಟಿನ 2026ನೇ ಸಾಲಿನ ಪ್ರಥಮ ವಿಶೇಷ ಸಭೆಯ ನಡವಳಿಗಳು.**

**ಉಪಸ್ಥಿತರು :**

| | | |
|---|---|---|
| 1. | ಪ್ರೊ. ಪಿ.ಎಲ್. ಧರ್ಮ<br>ಕುಲಪತಿಗಳು | ಅಧ್ಯಕ್ಷರು |
| 2. | ಪ್ರೊ. ಪುಟ್ಟಣ್ಣ<br>ಡೀನರು, ವಾಣಿಜ್ಯ ನಿಕಾಯ | ಸದಸ್ಯರು |
| 3. | ಡಾ.ಕೆ.ಸಿ. ಮಹದೇಶ | ಸದಸ್ಯರು |
| 4. | ಪ್ರೊ. ಉದಯ ಕುಮಾರ್ ಬಿ. | ಸದಸ್ಯರು |
| 5. | ಶ್ರೀಮತಿ ಶೃತಿ ಶೆಟ್ಟಿ | ಸದಸ್ಯರು |
| 6. | ಶ್ರೀ ಅಲೆಕ್ಸ್ ಐವನ್ ಸಿಕ್ವೇರಾ | ಸದಸ್ಯರು |
| 7. | ಶ್ರೀ ಸುರೇಶ್ ಕುಮಾರ್ ಬಿ. ನಾವೂರು | ಸದಸ್ಯರು |
| 8. | ಶ್ರೀ ಸಿ.ಎ. ನಿತಿನ್ ಜೆ. ಶೆಟ್ಟಿ | ಸದಸ್ಯರು |
| 9. | ಶ್ರೀ ರಘುರಾಜ್ | ಸದಸ್ಯರು |
| 10. | ಶ್ರೀಮತಿ ಜೂಡಿತ್ ಮೆಂಡೋನ್ಸ | ಸದಸ್ಯರು |
| 11. | ಶ್ರೀ ಅಚ್ಚುತ ಗಟ್ಟಿ | ಸದಸ್ಯರು |
| 12. | ಶ್ರೀ ಮಹಮ್ಮದ್ ಸವಾದ್ | ಸದಸ್ಯರು |
| 13. | ಶ್ರೀಮತಿ ಪುಷ್ಪಲತಾ ಹೆಚ್.ಕೆ.<br>ಪ್ರಾಂಶುಪಾಲರು ಮತ್ತು ಸಹ ನಿರ್ದೇಶಕರು,<br>ಸರ್ಕಾರಿ ಶಿಕ್ಷಕ ಶಿಕ್ಷಣ ಮಹಾವಿದ್ಯಾಲಯ,<br>**(ಶಾಲಾ ಶಿಕ್ಷಣ ಮತ್ತು ಸಾಕ್ಷರತೆ ಆಯುಕ್ತರ ಪರವಾಗಿ)** | ಸದಸ್ಯರು |

14. ಪ್ರೊ. ಹೆಚ್. ದೇವೇಂದ್ರಪ್ಪ ಸದಸ್ಯರು
ಕುಲಸಚಿವರು (ಪರೀಕ್ಷಾಂಗ)

15 ಶ್ರೀ ಪಂಚಲಿಂಗಸ್ವಾಮಿ, **ಕೆ.ಎಸ್.ಎ.ಎಸ್.**, ವಿಶೇಷ ಆಹ್ವಾನಿತರು
ಹಣಕಾಸು ಅಧಿಕಾರಿ (ಪ್ರಭಾರ)

16. ಡಾ. ಗಣೇಶ್ ಸಂಜೀವ್ ಸದಸ್ಯ ಕಾರ್ಯದರ್ಶಿ
ಪ್ರಭಾರ ಕುಲಸಚಿವರು (ಆಡಳಿತ)

**ಅನುಪಸ್ಥಿತರು:**

1. ಡಾ. ಕವಿತಾ ಕೆ.ಆರ್. ಸದಸ್ಯರು
ಜಂಟಿ ನಿರ್ದೇಶಕರು (ಕಾಲೇಜು ಶಿಕ್ಷಣ ಆಯುಕ್ತರ ಪರವಾಗಿ)

2. ತಾಂತ್ರಿಕ ಶಿಕ್ಷಣ ನಿರ್ದೇಶಕರು, ಸದಸ್ಯರು
ಕರ್ನಾಟಕ ಸರ್ಕಾರ
ಬೆಂಗಳೂರು

3. ಡಾ.ಎಸ್.ಬಿ.ಎಂ. ಪ್ರಸನ್ನ ಸದಸ್ಯರು

4. ಶ್ರೀ ನಿತ್ಯಾನಂದ ವಿ. ಗಾಂವಕರ ಸದಸ್ಯರು

5. ಡಾ. ಸಂದೇಶ್ ಕೆ.ಎಸ್ ಸದಸ್ಯರು
(ವೈದ್ಯಕೀಯ ಶಿಕ್ಷಣ ನಿರ್ದೇಶಕರ ಪರವಾಗಿ)

## ಪ್ರಾರಂಭಿಕ

ಪ್ರಾರಂಭದಲ್ಲಿ ಕುಲಸಚಿವರು ಸಿಂಡಿಕೇಟಿನ ಪ್ರಥಮ ವಿಶೇಷ ಸಭೆಗೆ ಸಭಾಧ್ಯಕ್ಷರಾದ ಮಾನ್ಯ ಕುಲಪತಿಯವರನ್ನು ಹಾಗೂ ಎಲ್ಲಾ ಸಿಂಡಿಕೇಟು ಸದಸ್ಯರುಗಳನ್ನು ಸ್ವಾಗತಿಸಿದರು.

## ಪ್ರಾಸ್ತಾವಿಕ

ಮಾನ್ಯ ಕುಲಪತಿಯವರು ಮತ್ತೊಮ್ಮೆ ಎಲ್ಲರನ್ನು ಸ್ವಾಗತಿಸಿ, ಸಭೆಯನ್ನು ಪ್ರಾರಂಭಿಸಿದರು.

ಈ ಕೆಳಗಿನ ವಿಷಯಗಳನ್ನು ಸಭೆಯ ಗಮನಕ್ಕೆ ತರಲಾಯಿತು.

1. ನಲ್ವತ್ತನಾಲ್ಕನೇ ವಾರ್ಷಿಕ ಘಟಿಕೋತ್ಸವದಲ್ಲಿ ಮಂಗಳೂರು ವಿಶ್ವವಿದ್ಯಾನಿಲಯದ ಗೌರವ ಡಾಕ್ಟರೇಟ್‌ಗೆ ಸ್ವೀಕೃತಗೊಂಡಿರುವ ಎಲ್ಲಾ 14 ಮಂದಿ ಗಣ್ಯರ ಹೆಸರು ಮತ್ತು ಪ್ರಸ್ತಾವನೆಗಳನ್ನು ಸಭೆಗೆ ಮಂಡಿಸಲಾಯಿತು. ಘನತೆವೆತ್ತ ಕುಲಾಧಿಪತಿಗಳ ಸೂಚನೆಯ ಮೇರೆಗೆ ಸ್ವೀಕೃತಗೊಂಡ ಎಲ್ಲಾ ಅರ್ಜಿಗಳನ್ನು ಕುಲಾಧಿಪತಿಗಳಿಗೆ ಕಳುಹಿಸಿಕೊಡುವ ಬಗ್ಗೆ ನಿರ್ಣಯಿಸಲಾಯಿತು. ಈ ಬಗ್ಗೆ ಸದಸ್ಯರು ಗೌಪ್ಯತೆಯನ್ನು ಕಾಪಾಡುವಂತೆ ಕೋರಲಾಯಿತು. ಆದಾಗ್ಯೂ ವಿಶ್ವವಿದ್ಯಾನಿಲಯ ಪರಿನಿಯಮದಲ್ಲಿರುವಂತೆ ಮಾನ್ಯ ಸಿಂಡಿಕೇಟು ಈಗಾಗಲೇ ಸ್ವೀಕೃತಗೊಂಡಿರುವ ಪ್ರಸ್ತಾವನೆಗಳನ್ನು ಪರಿಶೀಲನೆ ಮಾಡಿ ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿರುವ ಮೂರು ಸಾಧಕರನ್ನು ಶಿಫಾರಸ್ಸು ಮಾಡುವುದು ಸರಿಯಾದ ಕ್ರಮ ಎಂಬ ಅಭಿಪ್ರಾಯವನ್ನು ಸಿಂಡಿಕೇಟು ವ್ಯಕ್ತಪಡಿಸಿತು.

2. ವಿಶ್ವವಿದ್ಯಾನಿಲಯದ ಗೌರವ ಡಾಕ್ಟರೇಟ್ ಆಯ್ಕೆ ಸಮಿತಿಗೆ ವಿಶ್ವವಿದ್ಯಾನಿಲಯದ ನಾಮನಿರ್ದೇಶಿತ ಸದಸ್ಯರ ಹೆಸರನ್ನು ಸಭೆಯ ಗಮನಕ್ಕೆ ತರಲಾಯಿತು.

3. ವಿಶ್ವವಿದ್ಯಾನಿಲಯದ ಘಟಿಕೋತ್ಸವದಲ್ಲಿ ಮುಖ್ಯ ಅತಿಥಿಯಾಗಿ ಘಟಿಕೋತ್ಸವ ಪ್ರದಾನ ಭಾಷಣ ಮಾಡಲು ಡಾ. ಪಂಕಜ್ ಮಿತ್ತಲ್, ಸೆಕ್ರೆಟರಿ ಜನರಲ್, ಅಸೋಶಿಯೇಷನ್ ಆಫ್ ಇಂಡಿಯನ್ ಯುನಿರ್ವಸಿಟೀಸ್, ನವದೆಹಲಿ ಇವರನ್ನು ಆಹ್ವಾನಿಸುವ ಬಗ್ಗೆ ಮಾನ್ಯ ಕುಲಾಧಿಪತಿಗಳ ಅನುಮೋದನೆಗೆ ಶಿಫಾರಸ್ಸು ಮಾಡಲು ಸಿಂಡಿಕೇಟು ನಿರ್ಣಯಿಸಿತು.

ಕುಲಸಚಿವರು ಸದಸ್ಯರ ಸಲಹೆ ಸಹಕಾರಗಳಿಗೆ ಧನ್ಯವಾದಗಳನ್ನು ಅರ್ಪಿಸಿ ಸಭೆಯನ್ನು ಮುಕ್ತಾಯಗೊಳಿಸಿದರು.

| | |
|---|---|
| ಸಹಿ/- | ಸಹಿ/- |
| **ಕುಲಸಚಿವರು** | **ಕುಲಪತಿಯವರು** |